ಶ್ರೀ ಹೆಚ್.ಡಿ. ದೇವೇಗೌಡ (ಲೋಕೋಪಯೋಗಿ ಮತ್ತು ನೀರಾವರಿ ಮಂತ್ರಿಗಳು).—

ಅ) ಕೇಂದ್ರ ಸರ್ಕಾರವು ೧೯೮೮-೮೯ನೇ ಸಾಲಿಗೆ ರಾಜ್ಯದಲ್ಲಿ ಯಾವ ರಸ್ತೆಗಳನ್ನು ಹೊಸ ರಾಷ್ಟ್ರೀಯ ಹೆದ್ದಾರಿ ಎಂದು ಘೋಷಿಸಿಲ್ಲ.

ಆ) (ಅ) ನಲ್ಲಿ ಕೊಟ್ಟಿರುವ ಉತ್ತರದಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ.

ಸರಕಾರಿ ಶಾಲಾ ಕಾಲೇಜುಗಳನ್ನು ಇನ್ನೂ ಪ್ರಾರಂಭಿಸದಿರುವ ಬಗ್ಗೆ

೧೪೬೫. (೨೯೧೪) ಶ್ರೀ ಬಿ. ಲಕ್ಕಪ್ಪ (ಚಿಕ್ಕನಾಯಕನ ಹಳ್ಳಿ).—ಮಾನ್ಯ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯೆಯಿಟ್ಟು ಉತ್ತರಿಸುವರೇ:—

ಅ) ರಾಜ್ಯದ ತುಮಕೂರು ಜಿಲ್ಲೆಯಲ್ಲಿರುವ ಸರ್ಕಾರಿ ಹಿರಿಯ ಮತ್ತು ಕಿರಿಯ ಪ್ರಾಥಮಿಕ ಶಾಲೆಗಳು ಕಾರ್ಯಾರಂಭ ಮಾಡಿ ನಾಲ್ಕು ತಿಂಗಳು ಕಳೆದಿದ್ದರೂ ಎಷ್ಟೋ ಶಾಲೆಗಳು ಇದುವರೆಗೆ ಪ್ರಾರಂಭವಾಗದೆ ಶಾಲಾ ಬಾಗಿಲು ಮುಚ್ಚಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

ಆ) ಹಾಗಿದ್ದಲ್ಲಿ ಅದಕ್ಕೆ ಕಾರಣವೇನು ?

ಶ್ರೀ ಎಂ. ಚಂದ್ರಶೇಖರ್ (ಶಿಕ್ಷಣ ಮಂತ್ರಿಗಳು).—

ಅ) ತುಮಕೂರು ಜಿಲ್ಲೆಯಲ್ಲಿ ಹಿರಿಯ ಮತ್ತು ಕಿರಿಯ ಪ್ರಾಥಮಿಕ ಶಾಲೆಗಳು ಯಾವುವೂ ಮುಚ್ಚಿರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ರಾಜ್ಯದಲ್ಲಿ ಖಾಲಿ ಇರುವ ಪ್ರಾಥಮಿಕ ಶಾಲಾ ಶಿಕ್ಷಕರ ಹುದ್ದೆಗಳು

೧೪೬೬. (೨೯೧೫) ಶ್ರೀ ಬಿ. ಲಕ್ಕಪ್ಪ (ಚಿಕ್ಕನಾಯಕನಹಳ್ಳಿ).—ಮಾನ್ಯ ಶಿಕ್ಷಣ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯೆಯಿಟ್ಟು ಉತ್ತರಿಸುವರೇ:—

ಅ) ರಾಜ್ಯದಲ್ಲಿ ಖಾಲಿ ಇರುವ ಪ್ರಾಥಮಿಕ ಶಾಲಾ ಉಪಾಧ್ಯಾಯರ ಹುದ್ದೆಗಳೆಷ್ಟು ? ಮತ್ತು ಎಲ್ಲೆಲ್ಲಿ ಖಾಲಿ ಇವೆ ?

ಆ) ಈ ಹುದ್ದೆಗಳನ್ನು ತುಂಬಲು ಸರ್ಕಾರದವರು ಕೈಕೊಂಡಿರುವ ಕ್ರಮವೇನು ?

ಶ್ರೀ ಎಂ. ಚಂದ್ರಶೇಖರ್ (ಶಿಕ್ಷಣ ಮಂತ್ರಿಗಳು).—

ಅ) ರಾಜ್ಯದಲ್ಲಿ ಖಾಲಿ ಇರುವ ಪ್ರಾಥಮಿಕ ಶಾಲಾ ಶಿಕ್ಷಕರ ಹುದ್ದೆಗಳ ಸಂಖ್ಯೆ : ೮, ೩೬೧; ಜಿಲ್ಲಾವಾರು ಖಾಲಿ ಹುದ್ದೆಗಳ ಪಟ್ಟಿ ಲಗತ್ತಿಸಿದೆ.

ಆ) ಜಿಲ್ಲಾ ಆಯ್ಕೆ ಸಮಿತಿಗಳು ಈ ಖಾಲಿ ಹುದ್ದೆಗಳನ್ನು ತುಂಬಲು ಕ್ರಮ ತೆಗೆದುಕೊಳ್ಳುತ್ತಿವೆ.